## 3 ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಗಳ ನ್ಯಾಯಾಲಯ,

## ಬೆಂಗಳೂರು ನಗರ.

## ಸಿಸಿ. 6601/2017

| | |
|---|---|
| ಸಾಕ್ಷಿದಾರರ ಹೆಸರು | ಎ. ಭಾಸ್ಕರ ಶೆಟ್ಟಿ |
| ತಂದೆಯ ಹೆಸರು | ಸೀನಪ್ಪ ಶೆಟ್ಟಿ |
| ವಯಸ್ಸು | 50 ವರ್ಷ |
| ಉದ್ಯೋಗ | ವ್ಯಾಪಾರ |
| ವಾಸ | ಮಂಡ್ಯ. |
| ಪ್ರಮಾಣೀಕರಿಸಿದ ದಿನಾಂಕ | 28/06/2023 |

**ಮುಖ್ಯ ವಿಚಾರಣೆ : ಹಿ.ಸ ಸ. ಅಭಿಯೋಜಕರವರಿಂದ :**

ನನ್ನ ಸಹಿಯನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುಡಿಸಲಾಯಿತು. ಸದರಿ ಸಹಿಯನ್ನು ಸುಮಾರು 4-5 ವರ್ಷಗಳ ಹಿಂದೆ ಆರ್.ಟಿ. ನಗರ ಪೊಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ಪಂಚನಾಮೆಯನ್ನು ಮಾಡಿಲ್ಲ.

(ಈ ಹಂತದಲ್ಲಿ ಹಿ.ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಪರಿಶೀಲಿಸಿ ಅನುಮತಿ ನೀಡಲಾಯ್ತು)

**ಪಾಟೀ ಸವಾಲು : ಹಿ. ಸ. ಸ ಅಭಿಯೋಜಕರವರಿಂದ :**

2. ದಿನಾಂಕ 22/12/2016 ರಂದು ಆರ್.ಟಿ. ನಗರ ಪೊಲೀಸ್ ಠಾಣೆಯ ಆನಂತ ವಿಲ್ಲಾ ಎಂಬ ಮನೆಯ ಮುಂಬಾಗದಲ್ಲಿ ಫಿರ್ಯಾದಿದಾರರು ತೋರಿಸಿ ಕೊಟ್ಟ ಸ್ಥಳದಲ್ಲಿ ನನ್ನ ಹಾಗೂ ಶಿವಕುಮಾರ ರವರ ಸಮಕ್ಷಮ ಪೊಲೀಸರು ನಿಪಿ-2 ರಂತೆ ಪಂಚನಾಮೆ ಮಾಡಿರುತ್ತಾರೆ

ಎಂದರೆ ಸರಿಯಲ್ಲ. ಪಂಚನಾಮೆಯನ್ನು ಓದಿ ಹೇಳಿ ನಮ್ಮ ಸಹಿಗಳನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನನ್ನ ಸಮಕ್ಷಮ ಪಂಚನಾಮೆ ಮಾಡಿದ್ದರೂ ಸಹ ಮಾಡಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯ್ತು)

**ಓ.ಹೇ.ಕೇ.ಸ.ಇದೆ**

**3 ನೇ ಎ.ಸಿ.ಎಮ್.ಎಮ್.ನ್ಯಾ.**

**ಬೆಂಗಳೂರು.**